ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಹೈಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 6/10/20

## ಸಚಿವ ಸ್ಥಾನ ಪ್ರಶ್ನಿಸಿದ ಪಿಐಎಲ್ ವಿಚಾರಣೆ 21ಕ್ಕೆ



ಬೆಂಗಳೂರು: ವಿಧಾನ ಪರಿಷತ್‌ಗೆ ಆಯ್ಕೆಯಾಗಿರುವ ಎಚ್. ವಿಶ್ವನಾಥ್, ಎಂ.ಟಿ.ಬಿ. ನಾಗರಾಜ್ ಹಾಗೂ ಆರ್. ಶಂಕರ್‌ಗೆ ಸಚಿವ ಸ್ಥಾನ ನೀಡದಂತೆ ಸರ್ಕಾರಕ್ಕೆ ನಿರ್ದೇಶಿಸಬೇಕೆಂಬ ಮಧ್ಯಂತರ ಮನವಿ ಕುರಿತು ಅ.21ರಂದು ವಿಚಾರಣೆ ನಡೆಸುವುದಾಗಿ ಹೈಕೋರ್ಟ್ ತಿಳಿಸಿದೆ. ಮೂವರೂ ಸದಸ್ಯರ ಆಯ್ಕೆ ರದ್ದುಪಡಿಸಬೇಕು ಹಾಗೂ ಅವರಿಗೆ ಸಚಿವ ಸ್ಥಾನ ನೀಡದಂತೆ ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಕೋರಿ ಬೆಂಗಳೂರಿನ ವಕೀಲ ಎ.ಎಸ್. ಹರೀಶ ಮತ್ತು ಜಿ.ಮೋಹನ್ ಕುಮಾರ್ ಸಲ್ಲಿಸಿರುವ ಪ್ರತ್ಯೇಕ ಪಿಐಎಲ್‌ಗಳ ವಿಚಾರಣೆಯನ್ನು ಸಿಜೆ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಸೋಮವಾರ ನಡೆಸಿತು. ಆಯ್ಕೆ ರದ್ದು ಕೋರಿ ಸಲ್ಲಿಸಿರುವ ಅರ್ಜಿ ಇತ್ಯರ್ಥವಾಗುವರೆಗೂ ಸಚಿವ ಸ್ಥಾನ ನೀಡದಂತೆ ಸರ್ಕಾರಕ್ಕೆ ಮಧ್ಯಂತರ ಆದೇಶ ನಿಡಬೇಕು ಎಂದು ಅರ್ಜಿದಾರರ ಪರ ಸುಪ್ರೀಂಕೋರ್ಟ್ ಹಿರಿಯ ವಕೀಲ ಪ್ರಶಾಂತ್ ಭೂಷಣ್ ಪೀಠವನ್ನು ಕೋರಿದರು. ಅದನ್ನು ಪರಿಗಣಿಸಿದ ಪೀಠ, ಮಧ್ಯಂತರ ಮನವಿ ಕುರಿತು ಅ.21ರಂದು ವಿಚಾರಣೆ ನಡೆಸುವುದಾಗಿ ತಿಳಿಸಿತು.